**All India Radio: Bangalore**
**Regional Bulletin In Kannada**
**14.09.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.09.2025 / 2.30 p.m.**
**<><><><>**

ಮುಖ್ಯಾಂಶಗಳು

1. ಕೇಂದ್ರ ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಅನುದಾನದ ಸದ್ಬಳಕೆಗೆ ಅಧಿಕಾರಿಗಳಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ
2. ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅಧ್ಯಕ್ಷತೆಯಲ್ಲಿಂದು ಕೊಂಕಣ ರೈಲ್ವೆ ಬಳಕೆದಾರರ ಸಮಾಲೋಚನಾ ಸಭೆ : ವಿವಿಧ ರೈಲು ವ್ಯಾಪ್ತಿ ವಿಸ್ತರಣೆಗೆ ಪ್ರಸ್ತಾವ
3. ಪಾರಂಪರಿಕ ತಾಣ ಹಂಪಿ ಮುಡಿಗೆ ರಿವರ್‌ಸೈಡ್ ಹೆರಿಟೇಜ್ ಟೂರಿಸಂ ಪ್ರಶಸ್ತಿ
4. ಪ್ರಜಾಪ್ರಭುತ್ವ ದಿನಾಚರಣೆ ಪೂರ್ವಭಾವಿಯಾಗಿ ಇಂದು ಹಲವು ಜಿಲ್ಲೆಗಳಲ್ಲಿ ಬೈಕ್ ರ‍್ಯಾಲಿ

<><><><>

ಕೇಂದ್ರ ಸರ್ಕಾರ ವಿವಿಧ ಸಚಿವಾಲಯಗಳ ಅಡಿಯಲ್ಲಿ ರಾಜ್ಯದ ಅಭಿವೃದ್ಧಿಗಾಗಿ ವಿವಿಧ ಕಾಮಗಾರಿ ಮತ್ತು ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆ ಮಾಡುತ್ತದೆ. ಇದರಲ್ಲಿ ಪಾರದರ್ಶಕತೆ ಹಾಗೂ ಗುಣಮಟ್ಟವನ್ನು ಕಾಪಾಡಬೇಕು. ಅನುದಾನ ಸದ್ಬಳಕೆಯಾಗಬೇಕೆಂದು ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವ ಪ್ರಲ್ಹಾದ ಜೋಶಿ  ಹೇಳಿದ್ದಾರೆ. ಧಾರವಾಡದಲ್ಲಿ ಜರುಗಿದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ-ದಿಶಾ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಲ್ಲಿ ಶೂನ್ಯ ದರದಲ್ಲಿ ೫ ಕೆ.ಜಿ. ಪಡಿತರವನ್ನು  ದೇಶದ ೮೧.೩೫ ಕೋಟಿ ನಾಗರಿಕರಿಗೆ ಕೇಂದ್ರ ಸರ್ಕಾರದಿಂದ  ನೀಡಲಾಗುತ್ತಿದೆ. ಅಕ್ಕಿ ಅಥವಾ ಗೋಧಿ ಅಥವಾ ರಾಜ್ಯ ಸರ್ಕಾರದ ಕೋರಿಕೆಯ ಮೇರೆಗೆ ಸ್ಥಳೀಯವಾದ ದವಸಧಾನ್ಯಗಳನ್ನು ನೀಡಲು ಅವಕಾಶವಿದೆ. ಅರ್ಹ ಪಡಿತರದಾರನ ಐರಿಸ್ ಪಡೆದುಕೊಂಡು ಎಲೆಕ್ಟ್ರಾನಿಕ್ ವೆವಿಂಗ್ ಮಶೀನ್‌ಗೆ ಲಿಂಕ್ ಮಾಡಿ ಪಡಿತರ ವಿತರಿಸಲು ರಾಜ್ಯಗಳಿಗೆ ಸೂಚಿಸಲಾಗಿದೆ. ಇದನ್ನು ಕಡ್ಡಾಯವಾಗಿ ಎಲ್ಲ ರಾಜ್ಯ ಸರ್ಕಾರಗಳು ಪಾಲಿಸಬೇಕು. ಈ ಕುರಿತು ಆಹಾರ ನಾಗರಿಕ ಸರಬರಾಜು ಇಲಾಖೆ ಕೇಂದ್ರದ ಆಹಾರ ಇಲಾಖೆಗೆ ವರದಿ ಸಲ್ಲಿಸಬೇಕೆಂದು ಸಚಿವ ಪ್ರಲ್ಹಾದ ಜೋಶಿ ನಿರ್ದೇಶಿಸಿದರು

<><><><>

ಗೋವಾದ ಮಡಗಾಂವ್‌ನಲ್ಲಿ ಕೊಂಕಣ ರೈಲ್ವೆ ಬಳಕೆದಾರರ ಸಮಾಲೋಚನಾ ಸಮಿತಿ ಸಭೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಂಸದರು, ಬೆಂಗಳೂರು-ಮುರುಡೇಶ್ವರ ನಡುವೆ ಸಂಚರಿಸುವ ಮುರುಡೇಶ್ವರ ಎಕ್ಸ್‌ಪ್ರೆಸ್ ರೈಲನ್ನು ಗೋವಾದ ವಾಸ್ಕೋವರೆಗೆ ವಿಸ್ತರಿಸಲು ರೈಲ್ವೆ ಮಂಡಳಿಗೆ ಪ್ರಸ್ತಾವ ಸಲ್ಲಿಸಲು ನಿರ್ಣಯಿಸಲಾಯಿತು. ಕರ್ನಾಟಕ, ಗೋವಾ,

ಕೇರಳ ಮತ್ತು ಮಹಾರಾಷ್ಟ್ರ ರಾಜ್ಯಗಳ ವ್ಯಾಪ್ತಿಯ ರೈಲ್ವೆಗೆ ಸಂಬಂಧಿಸಿದ ಸಮಸ್ಯೆಗಳ ಜೊತೆಗೆ ಪ್ರಯಾಣಿಕರ ಬೇಡಿಕೆಗಳ ಬಗ್ಗೆಯೂ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು ಎಂದರು. 'ಕಾರವಾರ-ಬೆಂಗಳೂರು ನಡುವೆ ಸಂಚರಿಸುವ ಪಂಚಗಂಗಾ ಎಕ್ಸ್‌ಪ್ರೆಸ್ ರೈಲಿಗೆ ಈಗಿರುವ ೧೯ ಬೋಗಿಗಳ ಜತೆಗೆ ಇನ್ನೂ ೩ ಹೆಚ್ಚುವರಿ ಬೋಗಿಗಳನ್ನು ಸೇರಿಸಲು ರೈಲ್ವೆ ಮಂಡಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆ ನಿರ್ಣಯಿಸಿತು. ರೈಲ್ವೆ ವಿಸ್ತರಣೆಯಿಂದ ವಿವಿಧ ಕೈಗಾರಿಕಾ ಪ್ರದೇಶಗಳಿಗೆ ಉದ್ಯೋಗದ ಸಲುವಾಗಿ ತೆರಳುವ ನೂರಾರು ಜನರಿಗೆ ಅನುಕೂಲವಾಗಲಿದೆ ಎಂದು ಕಾಗೇರಿ ತಿಳಿಸಿದರು. ಈ ಸಂದರ್ಭದಲ್ಲಿ ಕೊಂಕಣ ರೈಲ್ವೆಗೆ ಸಂಬಂಧಿಸಿದ ಮಾಹಿತಿಯನ್ನು ಸುಲಭವಾಗಿ ಪಡೆಯಲು ಸಹಾಯ ಮಾಡುವ ಹೊಸ ಮೊಬೈಲ್ ಅಪ್ಲಿಕೇಶನ್ 'ಕೆ.ಆರ್.ಮಿರರ್' ನ್ನು ಸಂಸದ ಕಾಗೇರಿ ಬಿಡುಗಡೆ ಮಾಡಿದರು. ಸಭೆಯಲ್ಲಿ ಕೊಂಕಣ ರೈಲ್ವೆ ಮುಖ್ಯ ಪ್ರಧಾನ ವ್ಯವಸ್ಥಾಪಕ ಸಂತೋಷ್ ಕುಮಾರ್ ಝಾ, ನಾಲ್ಕು ರಾಜ್ಯಗಳ ಲಕ್ಕೂ ಹೆಚ್ಚು ಸಂಸದರು ಪಾಲ್ಗೊಂಡಿದ್ದರು.

<><><><>

ವಿಶ್ವ ಪಾರಂಪಾರಿಕ ತಾಣವಾದ ಹಂಪಿ, ರಿವರ್ ಸೈಡ್ ಹೆರಿಟೇಜ್ ಟೂರಿಸಂ ಪ್ರಶಸ್ತಿಯನ್ನು ತನ್ನ ಮುಡಿಗೇರಿಸಿಕೊಂಡಿದೆ ಎಂದು ಪ್ರವಾಸೋದ್ಯಮ ಆಯುಕ್ತ ಅಕ್ರಮ್ ಪಾಷಾ ತಿಳಿಸಿದ್ದಾರೆ. ವಿಶ್ವ ಪ್ರಸಿದ್ಧ ಐತಿಹಾಸಿಕ ಹಂಪಿಯು ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಗೌರವ ಸ್ಥಾನಮಾನವನ್ನು ಹೊಂದಿದ್ದು, ದೇಶ ಮತ್ತು ವಿದೇಶಿ ಪ್ರವಾಸಿಗರನ್ನು ತನ್ನತ್ತ ಸೆಳೆಯುತ್ತಿದೆ. ರಿವರ್ ಸೈಡ್ ಹೆರಿಟೇಜ್ ಟೂರಿಸಂ ಪ್ರಶಸ್ತಿಯನ್ನು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ದೆಹಲಿಯಲ್ಲಿ ಪ್ರದಾನ ಮಾಡಿದರು. ಈ ಪ್ರಶಸ್ತಿಯನ್ನು ಕರ್ನಾಟಕ ಪ್ರವಾಸೋದ್ಯಮ ಇಲಾಖೆ ಪರವಾಗಿ ದೆಹಲಿಯ ಕರ್ನಾಟಕ ಭವನದ ಪ್ರಧಾನ ವ್ಯವಸ್ಥಾಪಕ ಸುನಿಲ್ ಕುಮಾರ್ ಸ್ವೀಕರಿಸಿದರು. ಪ್ರಶಸ್ತಿ ಬಂದಿರುವ ಕುರಿತು ಪ್ರವಾಸೋದ್ಯಮ ಆಯುಕ್ತ ಅಕ್ರಂ ಪಾಷಾ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಅಕ್ರಂ ಪಾಷಾ (೪೦ ಸೆಕೆಂಡ್‌ಗಳು)**

<><><><>

ಬೆಂಗಳೂರು ರಸ್ತೆಗಳ ಅಭಿವೃದ್ಧಿಗೆ ಒಟ್ಟು ಸಾವಿರದ ೧೦೦ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ೧೪೭ ಕೋಟಿ ರೂಪಾಯಿ ಹಸಿರು ಕ್ರಿಯಾ ಯೋಜನೆಗೆ ಸರ್ಕಾರ ಅನುಮೋದನೆ ನೀಡಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಅವರು, ರಸ್ತೆ ಅಭಿವೃದ್ಧಿ ದೃಷ್ಟಿಯಿಂದ ಒಟ್ಟು ೧೪ ವಿಧಾನಸಭಾ ಕ್ಷೇತ್ರಗಳಿಗೆ ತಲಾ ೫೦ ಕೋಟಿ ರೂಪಾಯಿ ಅನುದಾನ ಹಾಗೂ ಉಳಿದ ಕ್ಷೇತ್ರಗಳಿಗೆ ತಲಾ ೨೫ ಕೋಟಿ ರೂಪಾಯಿ ನೀಡಲಾಗುವುದು ಎಂದಿದ್ದಾರೆ.

<><><><>

ನಾಳೆ ಆಚರಿಸಲಾಗುವ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಇಂದು ಕೊಪ್ಪಳ ಜಿಲ್ಲಾಡಳಿತ ಭವನದಿಂದ ಬೆಂಗಳೂರಿನವರೆಗೆ ಬೈಕ್ ರ‍್ಯಾಲಿ ನಡೆಯಿತು. ಕೊಪ್ಪಳ ಜಿಲ್ಲಾ ಪಂಚಾಯತ ಮುಖ್ಯ

ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಹಸಿರು ನಿಷಾನೆ ತೋರಿಸುವ ಮೂಲಕ ಚಾಲನೆ ನೀಡಿದರು ನಂತರ ಮಾತನಾಡಿದ ಅವರು, ನಮ್ಮ ಮತ ನಮ್ಮ ಹಕ್ಕು ಧ್ಯೆಯವ್ಯಾಕ್ಯದಂತೆ ಜನರಿಗೆ ತಿಳಿವಳಿಕೆ ನೀಡಲು ಬೈಕ್ ರ್‍ಯಾಲಿ ನಡೆಯುತ್ತಿದೆ ಎಂದು ಹೇಳಿದರು. ಭಾರತ ಪ್ರಪಂಚದಲ್ಲಿ ಅತಿದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ದೇಶವಾಗಿದೆ ವಿಶೇಷವಾಗಿ ಯುವ ಮತದಾರರನ್ನು ಸೆಳೆಯಲು ಮತ್ತು ಚುನಾವಣೆಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಚಾರಣೆ ನಿಮಿತ್ತ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠಲ ಬಿ. ಜಾಬಗೌಡರ ಹೇಳಿದರು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಬಳ್ಳಾರಿ ನಗರದಲ್ಲಿ ಇಂದು "ನನ್ನ ಮತ ನನ್ನ ಹಕ್ಕು" ಎಂಬ ಧ್ಯೇಯ ವಾಕ್ಯದಡಿ ಬೈಕ್ ರ್‍ಯಾಲಿಗೆ ಚಾಲನೆ ನೀಡಲಾಯಿತು. ಬಳ್ಳಾರಿಯಿಂದ ಬೆಂಗಳೂರುವರೆಗೆ ಬೈಕ್ ರ್‍ಯಾಲಿ ಆಯೋಜಿಸಿದ್ದು. ಹತ್ತು ದ್ವಿಚಕ್ರ ವಾಹನ ಸವಾರರು ಬೆಂಗಳೂರಿಗೆ ಪ್ರಯಾಣ ಬೆಳೆಸಿದರು. ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್, ಹಸಿರು ನಿಶಾನೆ ತೋರಿದರು.

<><><><>

ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರಿಗೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ದಸರಾ ಉತ್ಸವಕ್ಕೆ ಅಧಿಕೃತ ಆಹ್ವಾನ ನೀಡಿದರು. ಅರಮನೆಯಲ್ಲಿರುವ ನಿವಾಸದಲ್ಲಿ ಪ್ರಮೋದಾದೇವಿ ಒಡೆಯರ್ ಅವರನ್ನು ಭೇಟಿಯಾಗಿ ಸಾಂಪ್ರದಾಯಿಕವಾಗಿ ಫಲ ತಾಂಬೂಲ ನೀಡಿ ದಸರಾ ಉತ್ಸವಕ್ಕೆ ಆಹ್ವಾನಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾದ ಡಾ ಪುಷ್ಪಾ ಅಮರ್‌ನಾಥ್, ಜಿಲ್ಲಾಧಿಕಾರಿ ಜಿ. ಲಕ್ಷ್ಮೀ ಕಾಂತ ರೆಡ್ಡಿ, ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಅಪರ ಜಿಲ್ಲಾಧಿಕಾರಿ ಡಾ. ಪಿ.ಶಿವರಾಜು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಿನ್ನೆ ರಾಷ್ಟ್ರೀಯ ಲೋಕ ಅದಾಲತ್ ಯಶಸ್ವಿಯಾಗಿ ನಡೆದಿದೆ. ಅರ್ಜಿದಾರರು ತಮ್ಮ ತಮ್ಮ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡರು. ಲೋಕ ಅದಾಲತ್ ಅಂಗವಾಗಿ ನಿನ್ನೆ ಯಾದಗಿರಿ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ರಾಜಿ ಸಂಧಾನದ ಮೂಲಕ ೫೨ ಸಾವಿರದ ೮ ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಮರುಳಸಿದ್ದಾರಾಧ್ಯ ಎಚ್.ಜೆ. ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ, ಪ್ರಕರಣಗಳನ್ನು ಕಕ್ಷಿದಾರರು ಮತ್ತು ಅವರ ವಕೀಲರ ಸಮಕ್ಷಮ ಸಂಧಾನದ ಮೂಲಕ ವಿಲೇವಾರಿ ಮಾಡಿದರು. ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ೧೧ ಪೀಠಗಳನ್ನು ರಚಿಸಲಾಗಿತ್ತು. ಪ್ರಧಾನ ಜಿಲ್ಲಾ ಮತ್ತು ಸೆಷೆನ್ಸ್ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ೩೭ ಹಾಗೂ ೩೯೯ ವ್ಯಾಜ್ಯಪೂರ್ವ ಪ್ರಕರಣಗಳು ಇತ್ಯರ್ಥವಾದವು. ಕೋಲಾರ ಜಿಲ್ಲೆಯಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಸಿವಿಲ್, ಕ್ರಿಮಿನಲ್ ಮತ್ತು ವಿಮಾ ಪರಿಹಾರ

ಸಂಬಂಧಪಟ್ಟ ಪ್ರಕರಣಗಳು ಸೇರಿ ಒಟ್ಟು ೭೮ ಸಾವಿರದ ೩೬೪ ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಜಿ.ಎ.ಮಂಜುನಾಥ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾಹಿತಿ ಹಂಚಿಕೊಂಡ ಅವರು, ನ್ಯಾಯಾಲಯದಲ್ಲಿ ಚಾಲ್ತಿ ಇರುವ ಪ್ರಕರಣಗಳು ೯ ಸಾವಿರದ ೧೯೭ ಹಾಗೂ ವ್ಯಾಜ್ಯ ಪೂರ್ವ ಬ್ಯಾಂಕ್, ಟ್ರಾಫಿಕ್ ಪ್ರಕರಣಗಳು ಹಾಗೂ ಇತರೆ ಸಾರ್ವಜನಿಕ ಉಪಯುಕ್ತತಾ ಪ್ರಕರಣಗಳು ೬೯ ಸಾವಿರದ೧೬೭ ಪ್ರಕರಣಗಳು ರಾಜಿ ಮೂಲಕ ವಿಲೆವಾರಿಯಾಗಿರುತ್ತವೆ. ಅವುಗಳ ಪರಿಹಾರ ಮೊತ್ತ ರೂಪಾಯಿ ೩೩ ಕೋಟಿ ೯೨ ಲಕ್ಷದ ೧೫ ಸಾವಿರದ ೧೭೧ ರೂಪಾಯಿಗಳಾಗಿದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>